ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ
Bangalore Development Authority

ಸಂಖ್ಯೆ : ಬೆಂಅಪ್ರಾ/ನಯೋಸ/DLP-70/2790 /2025-26.
No. (E-162157)

ದಿನಾಂಕ :
Date : 23/10/2025

## "ವಸತಿಉದ್ದೇಶದ ಅಭಿವೃದ್ಧಿ ಯೋಜನಾ ನಕ್ಷೆ ಅನುಮೋದನೆ ಆದೇಶ"

**ವಿಷಯ:** ಬೆಂಗಳೂರು ದಕ್ಷಿಣ ತಾಲ್ಲೂಕು, ಉತ್ತರಹಳ್ಳಿ ಹೋಬಳಿ, ಯಡಿಯೂರು ನಾಗಸಂದ್ರ ಗ್ರಾಮದ ರೀ ಸ.ನಂ.36/2, ಬಿಬಿಎಂಪಿ ಪಿಐಡಿ ನಂ, 51-39-60/1 ರಲ್ಲಿ ಬರುವ ಜಮೀನಿನ ವಿಸ್ತೀರ್ಣದ 3ಎ-27ಗುಂ (0ಎ-20ಗುಂ ಅ ಖರಾಬು ಸೇರಿ, 0ಎ-06ಗುಂ ಬ ಖರಾಬು ಹೊರತುಪಡಿಸಿ) ವಿಸ್ತೀರ್ಣದ ಜಮೀನುಗಳಲ್ಲಿ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ಕಲಂ (17) ರ ಅಡಿಯಲ್ಲಿ ವಸತಿ ಅಭಿವೃದ್ಧಿ ಯೋಜನಾ ನಕ್ಷೆಗೆ ಅನುಮೋದನೆ ನೀಡುವ ಬಗ್ಗೆ.

**ಉಲ್ಲೇಖ:**
1. ಅರ್ಜಿದಾರರ ಅರ್ಜಿ ದಿನಾಂಕ 29.08.2025.
2. ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ನಗರ ಯೋಜನಾ ಸಮಿತಿ ಸಭೆಯ ಠರಾವು ಸಂಖ್ಯೆ 6.75/2025, ದಿನಾಂಕ 25.09.2025.
3. ಈ ಕಛೇರಿ ಪತ್ರ ಸಂಖ್ಯೆ ಬೆಂಅಪ್ರಾ/ನಯೋಸ/DLP-70/2544/2025-26, ದಿನಾಂಕ 08.10.2025.
4. ಪ್ರಾಧಿಕಾರದ ಆವರಣದಲ್ಲಿರುವ ಕೆನರಾ ಬ್ಯಾಂಕ್ ಶಾಖೆಯಲ್ಲಿ ಶುಲ್ಕ ಪಾವತಿಸಿರುವ ಚಲನ್ ಸಂಖ್ಯೆ GN25105257, ದಿನಾಂಕ 09.10.2025.
5. ಸರ್ಕಾರದ ಸುತ್ತೋಲೆ ಸಂಖ್ಯೆ: ನಅಇ/363/ಬಿಎಂಆರ್/2023(ಇ) ದಿನಾಂಕ 12.02.2024 ರಂತೆ ತಹಶೀಲ್ದಾರ್, ಬೆಂಗಳೂರು (ದಕ್ಷಿಣ) ತಾಲ್ಲೂಕು ರವರಿಗೆ ಬರೆದ ಪತ್ರ ಸಂಖ್ಯೆ: ಬೆಂಅಪ್ರಾ/ನಯೋಸ/DLP-70/2544/2025-26 ದಿನಾಂಕ 08.10.2025.
6. ಈ ಕಛೇರಿ ಸುತ್ತೋಲೆ ಸಂಖ್ಯೆ: ಬೆಂಅಪ್ರಾ/ಆಯು/ನಯೋಸ/510/2025-26 ದಿನಾಂಕ 08.05.2025.

*********

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖ [1] ರಲ್ಲಿನ ಬೆಂಗಳೂರು ದಕ್ಷಿಣ ತಾಲ್ಲೂಕು, ಉತ್ತರಹಳ್ಳಿ ಹೋಬಳಿ, ಯಡಿಯೂರು ನಾಗಸಂದ್ರ ಗ್ರಾಮದ ರೀ ಸ.ನಂ.36/2, ಬಿಬಿಎಂಪಿ ಪಿಐಡಿ ನಂ, 51-39-60/1 ರಲ್ಲಿ ಬರುವ ಜಮೀನಿನ ವಿಸ್ತೀರ್ಣದ 3ಎ-27ಗುಂ (0ಎ-20ಗುಂ ಅ ಖರಾಬು ಸೇರಿ, 0ಎ-06ಗುಂ ಬ ಖರಾಬು ಹೊರತುಪಡಿಸಿ) ವಿಸ್ತೀರ್ಣದ ಜಮೀನುಗಳಲ್ಲಿ ವಸತಿ ಅಭಿವೃದ್ಧಿ ಯೋಜನಾ ನಕ್ಷೆಯಲ್ಲಿ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ಕಲಂ (17) ರ ಅಡಿಯಲ್ಲಿ ವಸತಿ

---

ಅಭಿವೃದ್ಧಿ ಯೋಜನಾ ನಕ್ಷೆಗೆ ಅನುಮೋದನೆ ನೀಡುವಂತೆ ಅರ್ಜಿದಾರರಾದ ಶ್ರೀಮತಿ. ಶರ್ಮಿಳಾ ಭಕ್ತಾರಾಂ ರವರು ಕೋರಿರುತ್ತಾರೆ.

ಉಲ್ಲೇಖ [2] ರಲ್ಲಿ ನಮೂದಿಸಿರುವ ದಿನಾಂಕ 25.09.2025 ರಂದು ನಡೆದ ಪ್ರಾಧಿಕಾರದ ನಗರ ಯೋಜನಾ ಸಮಿತಿ ಸಭೆಯ ವಿಷಯ ಸಂಖ್ಯೆ 6.75/2025 ರಲ್ಲಿ ಮಂಡಿಸಿ ಚರ್ಚಿಸಲಾಗಿದ್ದು, ಚರ್ಚೆಯ ನಂತರ "ಸದರಿ ಜಮೀನುಗಳಿಗೆ ಹೊಂದಿಕೊಂಡಂತೆ ಪ್ರಾಧಿಕಾರದಿಂದ ಅಭಿವೃದ್ಧಿಪಡಿಸಿರುವ ಚನ್ನಮ್ಮಕೆರೆ ಅಚ್ಚುಕಟ್ಟು ಪ್ರದೇಶದ ಬನಶಂಕರಿ 2ನೇ ಹಂತದ ಬಡಾವಣೆಯಲ್ಲಿನ ಸಿ.ಎ ನಿವೇಶನದಲ್ಲಿ ಹಾಲಿ ಶಾಲಾ ಕಟ್ಟಡ ಮತ್ತು ಉದ್ಯಾನವನ ಪ್ರದೇಶ ಇರುವುದರಿಂದ, ಸಲ್ಲಿಸಿರುವ ವಸತಿ ಅಭಿವೃದ್ಧಿ ಯೋಜನಾ ನಕ್ಷೆಯು ಅನುಮೋದಿತ ಮಹಾಯೋಜನೆ RMP-2015 ರ ವಲಯ ನಿಯಮಾವಳಿಗಳಿಗೆ ಅನುಗುಣವಾಗಿರುವುದರಿಂದ, ಈ ಕೆಳಕಂಡ ಷರತ್ತುಗಳಿಗೊಳಪಡಿಸಿ, ಬೆಂಗಳೂರು ದಕ್ಷಿಣ ತಾಲ್ಲೂಕು, ಉತ್ತರಹಳ್ಳಿ ಹೋಬಳಿ, ಯಡಿಯೂರು ನಾಗಸಂದ್ರ ಗ್ರಾಮದ ರೀ ಸ.ನಂ.36/2, ಬಿಬಿಎಂಪಿ ಪಿಐಡಿ ನಂ, 51-39-60/1 ರಲ್ಲಿ ಬರುವ ಜಮೀನಿನ ವಿಸ್ತೀರ್ಣದ 3ಎ-27ಗುಂ (0ಎ-20ಗುಂ ಅ ಖರಾಬು ಸೇರಿ, 0ಎ-06ಗುಂ ಬ ಖರಾಬು ಹೊರತುಪಡಿಸಿ) ವಿಸ್ತೀರ್ಣದ ಜಮೀನುಗಳಲ್ಲಿ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ರ ಕಲಂ (17) ರ ಅಡಿಯಲ್ಲಿ ವಸತಿ ಅಭಿವೃದ್ಧಿ ಯೋಜನಾ ನಕ್ಷೆ ಅನುಮೋದಿಸಲು ತೀರ್ಮಾನಿಸಲಾಯಿತು. ಈ ಕುರಿತು ನಿಯಮಾನುಸಾರ ಮುಂದಿನ ಕ್ರಮವಹಿಸುವ ಅಧಿಕಾರವನ್ನು ಆಯುಕ್ತರು ರವರಿಗೆ ಪ್ರತ್ಯಾಯೋಜಿಸಲು ನಿರ್ಣಯಿಸಲಾಯಿತು."

ವಸತಿ ಅಭಿವೃದ್ಧಿ ಯೋಜನೆ ನಕ್ಷೆ ಅನುಮೋದನೆ ಸಂಬಂಧ ಅರ್ಜಿದಾರರಿಗೆ ಉಲ್ಲೇಖ (3) ರಲ್ಲಿ ವಿವಿಧ ಶುಲ್ಕಗಳ ಬಾಬ್ತು ₹. 38,43,840/- [₹. ಮುವತ್ತೆಂಟು ಲಕ್ಷದ ನಲವತ್ತಮೂರು ಸಾವಿರದ ಎಂಟು ನೂರ ನಲವತ್ತು ಮಾತ್ರ] ಗಳನ್ನು ಪ್ರಾಧಿಕಾರಕ್ಕೆ ಪಾವತಿಸಿ, ಚಲನ್ ಸಲ್ಲಿಸುವಂತೆ ತಿಳಿಸಲಾಗಿತ್ತು. ಅದರಂತೆ ಅರ್ಜಿದಾರರು ಉಲ್ಲೇಖ (4) ರಲ್ಲಿ ₹. 38,43,840/- [₹. ಮುವತ್ತೆಂಟು ಲಕ್ಷದ ನಲವತ್ತಮೂರು ಸಾವಿರದ ಎಂಟು ನೂರ ನಲವತ್ತು ಮಾತ್ರ] ಗಳನ್ನು ಕೆನರಾ ಬ್ಯಾಂಕ್ ನ ಚಲನ್ ನಂ. GN25105257, ದಿನಾಂಕ 09.10.2025 ರಂದು ಪಾವತಿಸಿ ಚಲನ್ ಸಲ್ಲಿಸಿರುತ್ತಾರೆ.

ಸರ್ಕಾರದ ದಿನಾಂಕ 12.02.2024 ರ ಸುತ್ತೋಲೆ ಸಂಖ್ಯೆ: ನಅಇ 363·ಬಿಎಂಆರ್ 2023 (ಇ) ರಂತೆ ಪ್ರಶ್ನಿತ ಜಮೀನಿಗೆ ಸಂಬಂಧಿಸಿದಂತೆ ಯಾವುದಾದರೂ ವ್ಯಾಜ್ಯ/ ಪ್ರಕರಣ/ ತಕರಾರು ಇರುವ ಕುರಿತು ವರದಿ ನೀಡುವಂತೆ ತಹಶೀಲ್ದಾರ್, ಬೆಂಗಳೂರು ದಕ್ಷಿಣ ತಾಲ್ಲೂಕು ರವರನ್ನು ಉಲ್ಲೇಖ (5) ರಲ್ಲಿ ಕೋರಲಾಗಿರುತ್ತದೆ.

ವಿಷಯ:- ಬೆಂಗಳೂರು ದಕ್ಷಿಣ ತಾಲ್ಲೂಕು, ಉತ್ತರಹಳ್ಳಿ ಹೋಬಳಿ, ಯಡಿಯೂರು ನಾಗಸಂದ್ರ ಗ್ರಾಮದ ರೀ ಸ.ನಂ.36/2, ಬಿಬಿಎಂಪಿ ಪಿಐಡಿ ನಂ, 51-39-60/1 ರಲ್ಲಿ ಬರುವ ಜಮೀನಿನ ವಿಸ್ತೀರ್ಣದ 3ಎ-27ಗುಂ (0ಎ-20ಗುಂ ಅ ಖರಾಬು ಸೇರಿ, 0ಎ-06ಗುಂ ಬ ಖರಾಬು ಹೊರತುಪಡಿಸಿ) ವಿಸ್ತೀರ್ಣದ ಜಮೀನುಗಳಲ್ಲಿ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ಕಲಂ (17) ರ ಅಡಿಯಲ್ಲಿ ವಸತಿ ಅಭಿವೃದ್ಧಿ ಯೋಜನಾ ನಕ್ಷೆಗೆ ಅನುಮೋದನೆ ನೀಡುವ ಬಗ್ಗೆ.

---

ಉಲ್ಲೇಖ (6) ರ ಪ್ರಾಧಿಕಾರದ ಸುತ್ತೋಲೆಯಂತೆ ವಸತಿ ಅಭಿವೃದ್ಧಿ ಯೋಜನಾ ನಕ್ಷೆಯಲ್ಲಿನ ಉದ್ಯಾನವನ / ಬಯಲುಜಾಗ ಹಾಗೂ ರಸ್ತೆ ವಿಸ್ತರಣೆಗಾಗಿ ಕಾಯ್ದಿರಿಸಿರುವ ಜಾಗಗಳನ್ನು ಸ್ಥಳೀಯ ಸಂಸ್ಥೆಗೆ ಉಚಿತವಾಗಿ ನೊಂದಾಯಿತ ಪರಿತ್ಯಾಜನಾ ಪತ್ರದ ಮೂಲಕ ಹಸ್ತಾಂತರಿಸಿ ಸ್ಥಳೀಯ ಸಂಸ್ಥೆಯು ಹಸ್ತಾಂತರಿಸಿಕೊಂಡಿರುವ / ಹಸ್ತಾಂತರಿಸಿರುವ ಪರಿತ್ಯಾಜನಾ ಪತ್ರದ ಪ್ರತಿಯನ್ನು ಪ್ರಾಧಿಕಾರಕ್ಕೆ ಸಲ್ಲಿಸುವುದು.

ಮೇಲ್ಕಂಡ ಅಂಶಗಳ ಹಿನ್ನೆಲೆಯಲ್ಲಿ, ಬೆಂಗಳೂರು ದಕ್ಷಿಣ ತಾಲ್ಲೂಕು, ಉತ್ತರಹಳ್ಳಿ ಹೋಬಳಿ, ಯಡಿಯೂರು ನಾಗಸಂದ್ರ ಗ್ರಾಮದ ರೀ ಸ.ನಂ.36/2, ಬಿಬಿಎಂಪಿ ಪಿಐಡಿ ನಂ, 51-39-60/1 ರಲ್ಲಿ ಬರುವ ಜಮೀನಿನ ವಿಸ್ತೀರ್ಣದ 3ಎ-27ಗುಂ (0ಎ-20ಗುಂ ಅ ಖರಾಬು ಸೇರಿ, 0ಎ-06ಗುಂ ಬ ಖರಾಬು ಹೊರತುಪಡಿಸಿ) ವಿಸ್ತೀರ್ಣದ ಜಮೀನುಗಳಲ್ಲಿ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ರ ಕಲಂ 15 & 17 ರ ಅಡಿಯಲ್ಲಿ ವಸತಿ ಅಭಿವೃದ್ಧಿ ಯೋಜನಾ ನಕ್ಷೆಗೆ ಈ ಕೆಳಕಂಡ ಷರತ್ತುಗಳಿಗೊಳಪಡಿಸಿ ಅನುಮೋದನೆ ನೀಡಲಾಗಿದೆ.

| | |
|---|---|
| 1. | ವಸತಿ ಅಭಿವೃದ್ಧಿ ಯೋಜನಾ ನಕ್ಷೆಯಲ್ಲಿನ ಉದ್ಯಾನವನ ಮತ್ತು ಬಯಲು ಜಾಗಗಳು ಹಾಗೂ ಹಾಲಿ ರಸ್ತೆ ವಿಸ್ತರಣೆಗಾಗಿ ಕಾಯ್ದಿರಿಸಿರುವ ಪ್ರದೇಶವನ್ನು ನೊಂದಾಯಿತ ಪರಿತ್ಯಾಜನಾ ಪತ್ರದ ಮುಖಾಂತರ ಸ್ಥಳಿಯ ಸಂಸ್ಥೆಗೆ ಪುಕ್ಕಟೆಯಾಗಿ ಹಸ್ತಾಂತರಿಸುವುದು ಹಾಗೂ ಸದರಿ ಪರಿತ್ಯಾಜನಾ ಪತ್ರದ ಪ್ರತಿಯನ್ನು ಪ್ರಾಧಿಕಾರಕ್ಕೆ ಸಲ್ಲಿಸುವುದು. |
| 2. | ಪ್ರಾಧಿಕಾರವು ಅನುಮೋದಿಸಿರುವ ವಸತಿ ಅಭಿವೃದ್ಧಿ ಯೋಜನಾ ನಕ್ಷೆಯಂತೆಯೇ ಅಭಿವೃದ್ಧಿ ಕಾರ್ಯಗಳನ್ನು ಕಾರ್ಯಗತ ಮಾಡುವುದು. ಪ್ರಾಧಿಕಾರದ ಪೂರ್ವಾನುಮತಿ ಇಲ್ಲದೆ ಯಾವುದೇ ಬದಲಾವಣೆ ಮಾಡುವಂತಿಲ್ಲ. |
| 3. | ಅನುಮೋದಿತ ವಸತಿ ಅಭಿವೃದ್ಧಿ ಯೋಜನಾ ನಕ್ಷೆಯಲ್ಲಿ ಕಾಯ್ದಿರಿಸಿರುವ ಉದ್ಯಾನವನ / ಬಯಲುಜಾಗದ ಪ್ರದೇಶವು ಸೇರಿದಂತೆ ಹಾಗೂ ಅಭಿವೃದ್ಧಿಪಡಿಸಲು ಉದ್ದೇಶಿಸಿರುವ ಕಟ್ಟಡದ ಒಟ್ಟು ಫ್ಲೋರ್ ವಿಸ್ತೀರ್ಣದ ಪ್ರತಿ 240.0 ಚ.ಮೀ FAR (Builtup Area) ಪ್ರದೇಶಕ್ಕೆ ಒಂದು ಮರದಂತೆ ವಿವಿಧ ಜಾತಿಯ ಗಿಡಮರಗಳನ್ನು ಬೆಳೆಸುವುದು. ಕಟ್ಟಡ ಸ್ವಾಧೀನ ಪತ್ರ ನೀಡುವ ಸಕ್ಷಮ ಪ್ರಾಧಿಕಾರವು ಸ್ವಾಧೀನ ಪತ್ರ ನೀಡುವ ಸಂದರ್ಭದಲ್ಲಿ ಸದರಿ ಗಿಡಮರಗಳ ಕನಿಷ್ಠ 2.00 ಮೀ ಎತ್ತರ ಇರುವುದನ್ನು ಖಚಿತಪಡಿಸಿಕೊಳ್ಳುವುದು. |
| 4. | ವಿವರವಾದ ಕಟ್ಟಡ ನಕ್ಷೆಗಳನ್ನು ಸಕ್ಷಮ ಪ್ರಾಧಿಕಾರದಿಂದ ಅನುಮೋದಿಸಿಕೊಳ್ಳುವುದು. |

ವಿಷಯ:- ಬೆಂಗಳೂರು ದಕ್ಷಿಣ ತಾಲ್ಲೂಕು, ಉತ್ತರಹಳ್ಳಿ ಹೋಬಳಿ, ಯಡಿಯೂರು ನಾಗಸಂದ್ರ ಗ್ರಾಮದ ರೀ ಸ.ನಂ.36/2, ಬಿಬಿಎಂಪಿ ಪಿಐಡಿ ನಂ, 51-39-60/1 ರಲ್ಲಿ ಬರುವ ಜಮೀನಿನ ವಿಸ್ತೀರ್ಣದ 3ಎ-27ಗುಂ (0ಎ-20ಗುಂ ಅ ಖರಾಬು ಸೇರಿ, 0ಎ-06ಗುಂ ಬ ಖರಾಬು ಹೊರತುಪಡಿಸಿ) ವಿಸ್ತೀರ್ಣದ ಜಮೀನುಗಳಲ್ಲಿ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ಕಲಂ (17) ರ ಅಡಿಯಲ್ಲಿ ವಸತಿ ಅಭಿವೃದ್ಧಿ ಯೋಜನಾ ನಕ್ಷೆಗೆ ಅನುಮೋದನೆ ನೀಡುವ ಬಗ್ಗೆ.

---

| | |
|---|---|
| 5. | ಸದರಿ ಪ್ರದೇಶದ ಒಳಗೆ ಹೋಗಲು ಮತ್ತು ಹೊರಗೆ ಬರಲು ಸಂಚಾರ ವ್ಯವಸ್ತೆಯಲ್ಲಿ ಅಡಚಣೆ ಉಂಟಾಗದಂತೆ ವ್ಯವಸ್ಥೆ ಕಲ್ಪಿಸುವುದು. ವಾಹನ ತಪಾಸಣೆಗೆ ಮತ್ತು ಭದ್ರತಾ ವ್ಯವಸ್ಥೆಯನ್ನು ಅಳವಡಿಸಿದಲ್ಲಿ ಸ್ವತ್ತಿನ ಒಳಭಾಗದಲ್ಲಿ ನಿರ್ವಹಿಸುವುದು. |
| 6. | ಕಟ್ಟಡ ಕಾಮಗಾರಿ ಪ್ರಾರಂಭವಾದ ನಂತರ ಕಟ್ಟಡ ಸುರಕ್ಷತೆಯ ಬಗ್ಗೆ ಸಂಬಂಧಿಸಿದ ಸಕ್ಷಮ ಪ್ರಾಧಿಕಾರವು ಪರಿಶೀಲಿಸಿಕೊಳ್ಳತಕ್ಕದ್ದು. ಸಿವಿಲ್ ಕಾಮಗಾರಿ ಮತ್ತು ಕಟ್ಟಡ ಕಾಮಾಗಾರಿಗೆ BWSSB ಯಿಂದ ಸಂಸ್ಕರಿಸಿದ ತ್ಯಾಜ್ಯ ನೀರನ್ನು ಪಡೆದು ಉಪಯೋಗಿಸಿಕೊಳ್ಳತಕ್ಕದ್ದು. |
| 7. | ವಸತಿ ಅಭಿವೃದ್ಧಿ ಯೋಜನಾ ನಕ್ಷೆಯಲ್ಲಿ ಕಾಯ್ದಿರಿಸಿರುವ ಸಿ.ಎ ಜಾಗವನ್ನು ಯಥಾವತ್ತಾಗಿ ಹಾಲಿ ಸ್ಥಳದಲ್ಲಿ ವಲಯ ನಿಯಮಾವಳಿಗಳ ಅಧ್ಯಾಯ 7.1.2 ರಂತೆ ಅಭಿವೃದ್ಧಿಪಡಿಸತಕ್ಕದ್ದು. |
| 8. | ಪ್ರಸ್ತಾವನೆಯಲ್ಲಿನ ಜಮೀನುಗಳ ಕುರಿತು ಯಾವುದೇ ವ್ಯಾಜ್ಯ / ಪ್ರಕರಣ / ತಕರಾರುಗಳು ಇರುವ ಕುರಿತು ತಹಶೀಲ್ದಾರ್, ಬೆಂಗಳೂರು ದಕ್ಷಿಣ ತಾಲ್ಲೂಕು ರವರಿಂದ ಮಾಹಿತಿಯನ್ನು ಕೋರಲಾಗಿದ್ದು, ಸದರಿಯವರಿಂದ ವ್ಯತಿರಿಕ್ತವಾಗಿ ವರದಿ ಸ್ವೀಕೃತವಾದಲ್ಲಿ ಅನುಮೋದಿತ ವಸತಿ ಅಭಿವೃದ್ಧಿ ಯೋಜನಾ ನಕ್ಷೆಯನ್ನು ರದ್ದುಪಡಿಸುವ / ಹಿಂಪಡೆಯುವ ಷರತ್ತಿಗೆ ಒಳಪಟ್ಟಿರುತ್ತದೆ. |
| 9. | ಅರ್ಜಿದಾರರು ಉದ್ದೇಶಿಸಿರುವ ಜಮೀನಿನಲ್ಲಿ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ / ಅನ್ಯಖಾಸಗಿ ಜಮೀನುಗಳೇನಾದರೂ ಸೇರಿಕೊಂಡಿರುವುದು ತಿಳಿದುಬಂದಲ್ಲಿ ಅಂತಹ ಸಂದರ್ಭದಲ್ಲಿ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ಆಯುಕ್ತರು ಅನುಮೋದಿತ ಅಭಿವೃದ್ಧಿ ನಕ್ಷೆಯನ್ನು ಮಾರ್ಪಾಡು ಮಾಡಲು ಅಥವಾ ಹಿಂತೆಗೆದುಕೊಳ್ಳಲು ಅಧಿಕಾರವುಳ್ಳವರಾಗಿರುತ್ತಾರೆ. |
| 10. | ದಿನಾಂಕ: 16/1/2010 ರಂದು ಸರ್ಕಾರದ ಅಪರ ಮುಖ್ಯಕಾರ್ಯದರ್ಶಿ ನಗರಾಭಿವೃದ್ಧಿ ಇಲಾಖೆ ಇವರ ಅಧ್ಯಕ್ಷತೆಯಲ್ಲಿ ಜರುಗಿದ ಸಭೆಯ ನಡವಳಿಯಲ್ಲಿ ತೆಗೆದುಕೊಂಡ ನಿರ್ಣಯದಂತೆ ಹಾಗೂ ದಿನಾಂಕ: 07/01/2011 ರಂದು ಜರುಗಿದ ಸಮಿತಿ ಸಭೆಯ ವಿಷಯ ಸಂಖ್ಯೆ:09/2011ರ ತೀರ್ಮಾನದಂತೆ ಅಭಿವೃದ್ಧಿ ನಕ್ಷೆಯಲ್ಲಿ Arrangement of Blocks ಗಳನ್ನು ವಲಯನಿಯಮಾವಳಿಗಳಂತೆ ಪರಿಶೀಲಿಸಲಾಗಿದ್ದು, ಕಟ್ಟಡನಕ್ಷೆಗೆ ಸಂಬಂಧಿಸಿದ ಇತರೆ ವಿವರಗಳನ್ನು ಪರಿಶೀಲಿಸುವುದಿಲ್ಲ. ಇದನ್ನು ಕಟ್ಟಡನಕ್ಷೆ ಅನುಮೋದಿಸುವ ಸಕ್ಷಮ ಪ್ರಾಧಿಕಾರವು ಸದರಿ ಕಟ್ಟಡ ನಿರ್ಮಾಣ ಸಂಬಂಧಿಸಿದಂತೆ ಅವಶ್ಯವಿರುವ ವಿವಿಧ ಇಲಾಖೆಗಳಿಂದ ಅಗತ್ಯ NOC ಗಳನ್ನು ಮತ್ತು ಇನ್ನಿತರೇ ಮಾಹಿತಿಗಳನ್ನು ಅರ್ಜಿದಾರರಿಂದ ಪಡೆದು ನಿಯಮಾನುಸಾರ ಪರಿಶೀಲಿಸಿಕೊಳ್ಳತಕ್ಕದ್ದು. |

| | |
|---|---|
| 11. | ವಸತಿ ಅಭಿವೃದ್ಧಿ ಯೋಜನಾ ನಕ್ಷೆ ಅನುಮೋದನೆ ಸಂಬಂಧ ಜಮೀನಿನ ಮಾಲೀಕತ್ವದ ಬಗ್ಗೆ ಅರ್ಜಿದಾರರು ತಪ್ಪು ಮಾಹಿತಿ / ದಾಖಲಾತಿ ನೀಡಿ ಅನುಮೋದನೆ ಪಡೆದಿದ್ದು ದೃಢಪಟ್ಟಲ್ಲಿ ಮತ್ತು ಮಾಲೀಕತ್ವದ ಬಗ್ಗೆ ನ್ಯಾಯಾಲಯದಲ್ಲಿ ತಕರಾರು ಉದ್ಭವವಾದಲ್ಲಿ ಅಭಿವೃದ್ಧಿ ಯೋಜನಾ ನಕ್ಷೆಯ ಅನುಮೋದನೆಯನ್ನು ರದ್ದುಗೊಳಿಸುವ ಅಥವಾ ಹಿಂಪಡೆಯುವ ಅಧಿಕಾರವನ್ನು ಕೆಟಿಸಿಪಿ ಕಾಯ್ದೆ ಕಲಂ 76(O) ರಡಿಯಲ್ಲಿ ಪ್ರಾಧಿಕಾರದ ಆಯುಕ್ತರು ಅಧಿಕಾರ ಹೊಂದಿದ್ದು, ಅದರಂತೆ ಕ್ರಮ ಜರುಗಿಸಲಾಗುವುದು. |
| 12. | ವಸತಿ ಅಭಿವೃದ್ಧಿ ಯೋಜನೆಯಲ್ಲಿನ ಕಟ್ಟಡಗಳಿಂದ ಉತ್ಪತ್ತಿಯಾಗುವ ಘನತ್ಯಾಜ್ಯಗಳ ವಿಂಗಡಣೆ ಮತ್ತು ಶೇಖರಣೆಗಾಗಿ ಸೂಕ್ತ ಸ್ಥಳವನ್ನು ಕಾಯ್ದಿರಿಸತಕ್ಕದ್ದು. |
| 13. | ಪ್ರಸ್ತಾಪಿತ ಜಮೀನನ್ನು ಅಭಿವೃದ್ಧಿಪಡಿಸುವ ಸಂದರ್ಭದಲ್ಲಿ ಅರ್ಜಿದಾರರು ಕಡ್ಡಾಯವಾಗಿ ಮಳೆನೀರು ಮಳೆ ನೀರು ಕೋಯ್ಲಿಗೆ ಸಂಬಂಧಿಸಿದಂತೆ ಪೂರ್ಣ ವಿವರಗಳನ್ನು ನಕ್ಷೆಯಲ್ಲಿ ಗುರುತಿಸಿ ಉದ್ದೇಶಿತ ಒಟ್ಟು ಕ್ಷೇತ್ರದಲ್ಲಿ ಯಾವುದೇ ರೀತಿಯ ಮಳೆ ನೀರು ವ್ಯರ್ಥವಾಗಿ ಹೊರಗೆ ಹೋಗದಂತೆ ಉದ್ದೇಶಿತ ಜಮೀನಿನಲ್ಲಿಯೇ ಭೂಮಿಯ ಒಳಗಡೆ ಇಂಗುವಂತೆ ಮಾಡಲು ವಿನ್ಯಾಸವನ್ನು ಸಿದ್ಧಪಡಿಸಿ ಪೂರ್ಣ ವಿವರಗಳನ್ನು ನಕ್ಷೆಯಲ್ಲಿ ಗುರುತಿಸಿ ತೋರಿಸತಕ್ಕದ್ದು. |
| 14. | ಪ್ರಸ್ತಾಪಿತ ಜಮೀನನ್ನು ಅಭಿವೃದ್ಧಿ ಪಡಿಸುವ ಸಂದರ್ಭದಲ್ಲಿ BESCOM ನಿರ್ದೇಶನದಂತೆ ಎಲೆಕ್ಟ್ರಿಕ್ ಕೇಬಲ್ ಗಳನ್ನು ಅಳವಡಿಸತಕ್ಕದ್ದು. |
| 15. | ಪ್ರಾಧಿಕಾರವು ಅನುಮೋದಿಸಿರುವ ಅಭಿವೃದ್ಧಿ ಯೋಜನಾ ನಕ್ಷೆಯಂತೆಯೇ ಅಭಿವೃದ್ಧಿ ಕಾರ್ಯಾಗಳನ್ನು ಕಾರ್ಯಗತ ಮಾಡುವುದು. ಪ್ರಾಧಿಕಾರದ ಪೂರ್ವಾನುಮತಿ ಇಲ್ಲದೆ ಯಾವುದೇ ಬದಲಾವಣೆ ಮಾಡುವಂತಿಲ್ಲ. |
| 16. | ನಾಲಾ ಬಫರ್ ಗಾಗಿ ಕಾಯ್ದಿರಿಸಿರುವ ಪ್ರದೇಶವನ್ನು ಸ್ಥಳೀಯ ಸಂಸ್ಥೆ ಅಥವಾ ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ ಇತರೆ ಸರ್ಕಾರಿ ಅಥವಾ ಸರ್ಕಾರೇತರ ಸಂಸ್ಥೆಗಳಿಂದ Storm Water Drain ಅಥವಾ ಒಳಚರಂಡಿ ವ್ಯವಸ್ಥೆಗಳು ಹಾಗೂ ರಸ್ತೆಯನ್ನು ಅಭಿವೃದ್ಧಿಪಡಿಸುವ ಸಂದರ್ಭದಲ್ಲಿ ಮುಫತ್ತಾಗಿ ಸಾರ್ವಜನಿಕ ಉಪಯೋಗಕ್ಕಾಗಿ ನೊಂದಾಯಿತ ಪರಿತ್ಯಜನಾ ಪತ್ರದ ಮೂಲಕ ಪ್ರಾಧಿಕಾರಕ್ಕೆ ಹಸ್ತಾಂತರಿಸತಕ್ಕದ್ದು. |

| | |
|---|---|
| 17. | ರೆವಿನ್ಯೂ ದಾಖಲೆಗಳ / ಜಮೀನಿನ ಮಾಲೀಕತ್ವದ ದಾಖಲೆಗಳ ಸಂಬಂಧ ಯಾವುದೇ ನ್ಯಾಯಾಲಯದಲ್ಲಿ ಲೋಕಾಯುಕ್ತದಲ್ಲಾಗಲೀ ಯಾವುದೇ ಪ್ರಕರಣ ಇರುವುದಿಲ್ಲವೆಂದು ಸಲ್ಲಿಸಿರುವ ನೋಟರೈಸ್ಡ್ ಪ್ರಮಾಣ ಪತ್ರಕ್ಕೆ ಬದ್ಧರಾಗಿರತಕ್ಕದ್ದು. ಪ್ರಾಧಿಕಾರವು ಈ ಬಗ್ಗೆ ಜವಾಬ್ದಾರಿಯಾಗುವುದಿಲ್ಲ. |
| 18. | ವಸತಿ ಯೋಜನೆಯಲ್ಲಿನ ವಸತಿ ಘಟಕಗಳಿಗೆ ಕುಡಿಯುವ ನೀರಿಗಾಗಿ ಮತ್ತು ಇತರೆ ಉಪಯೋಗದ ನೀರಿಗಾಗಿ ಪ್ರತ್ಯೇಕವಾದ ಕೊಳಾಯಿ ವ್ಯವಸ್ಥೆಯನ್ನು (Duel piping System) ಮಾಡತಕ್ಕದ್ದು. ವಸತಿ ಘಟಕಗಳಿಂದ ಬರುವ ಕೊಳಚೆ ನೀರನ್ನು ಸಂಸ್ಕರಣೆ ಮಾಡಲು ಯೋಜನೆಯಲ್ಲಿ ಸಂಸ್ಕರಣಾ ಘಟಕ ಸ್ಥಾಪಿಸಿ, ಸಂಸ್ಕರಿಸಿದ ನೀರನ್ನು ಇತರೆ ಉಪಯೋಗಗಳಿಗಾಗಿ ಉಪಯೋಗಿಸತಕ್ಕದ್ದು ಮತ್ತು ಒಳಚರಂಡಿ ವ್ಯವಸ್ಥೆಯನ್ನು ಅರ್ಜಿದಾರರೇ ಕಲ್ಪಿಸುವುದು. |
| 19. | BWSSB,BESCOM, KSPCB, ವಾಯುಯಾನ ಪ್ರಾಧಿಕಾರ, ಅಗ್ನಿಶಾಮಕ ಇಲಾಖೆ ಗಳಿಂದ NOC ಪಡೆದು ಕಟ್ಟಡ ನಕ್ಷೆ ಅನುಮೋದನೆ ಮೊದಲು ಸಕ್ಷಮ ಪ್ರಾಧಿಕಾರಕ್ಕೆ ಸಲ್ಲಿಸಬೇಕಿರುತ್ತದೆ. ಅನುಮತಿ ನೀಡುವ ಸಕ್ಷಮ ಪ್ರಾಧಿಕಾರವು ಅದನ್ನು ಪರಿಸೀಲಿಸಿಕೊಳ್ಳತಕ್ಕದ್ದು. |
| 20. | ಪ್ರಶ್ನಿತ ಪ್ರದೇಶದಲ್ಲಿ ಹಾದು ಹೋಗುವ ಹಳ್ಳ ಕೊಳ್ಳಗಳ ನೀರಿನ ಹರಿವಿಗೆ ಅಡಚಣೆ ಉಂಟು ಮಾಡದೆ ಸರಾಗವಾಗಿ ಹಾದು ಹೋಗುವಂತೆ ಅಭಿವೃದ್ಧಿ ಪಡಿಸುವುದು. |
| 21. | ಸ್ವಾಭಾವಿಕವಾಗಿ ಇಳಿಮಟ್ಟದ ಕಡೆ ಹೋಗುವ ಮಳೆನೀರನ್ನು ಡ್ರೈನ್ ಮುಖಾಂತರ ವ್ಯಾಲಿಗೆ ತಂದು ಸೇರಿಸುವುದು ಹಾಗೂ ನೀರು ಸರಾಗವಾಗಿ ಹರಿಯಲು ಸೂಕ್ತ ವ್ಯವಸ್ಥೆ ಮಾಡುವುದು. |
| 22. | ಕಟ್ಟಡ ನಕ್ಷೆ ಅನುಮೋದನೆ ಸಮಯದಲ್ಲಿ ತಳಮಹಡಿ ಅಗತ್ಯತೆ ಬಗ್ಗೆ Water table ನ ವರದಿ ಪಡೆದು ಅದಕ್ಕನುಗುಣವಾಗಿ ಕ್ರಮ ಜರುಗಿಸುವುದು. |
| 23. | ವಲಯ ನಿಯಮಾವಳಿಗಳ Space Standards ನಂತೆ ಹಾಲಿಇರುವ ರಸ್ತೆಗೆ ಅನ್ವಯವಾಗುವಂತೆ ಕಟ್ಟಡ ನಕ್ಷೆಗಳಿಗೆ ಅನುಮೋದನೆ ನೀಡುವುದು. |
| 24. | ಬಫರ್ ಪ್ರದೇಶದಲ್ಲಿ ಗಿಡಮರಗಳನ್ನು ಬೆಳಸತಕ್ಕದ್ದು. |
| 25. | ಪ್ರಶ್ನಿತ ಪ್ರದೇಶದಲ್ಲಿ ಉದ್ದೇಶಿತ ಕಟ್ಟಡದ ಒಟ್ಟು ಫ್ಲೋರ್ ವಿಸ್ತೀರ್ಣದ ಪ್ರತಿ 240.0ಚ.ಮೀಗೆ ಒಂದು ಮರದಂತೆ ಗಿಡ / ಮರಗಳನ್ನು ನೆಟ್ಟು ಪೋಷಿಸತಕ್ಕದ್ದು. |

| | |
|---|---|
| 26. | ಪ್ರಶ್ನಿತ ಜಮೀನುಗಳಲ್ಲಿ ಉತ್ಖನನ ದಿಂದ (Excavation) ಲಭ್ಯವಾಗುವ ಉಪಖನಿಜಗಳಾದ ಮುರ್ರಂ, ಕಟ್ಟಡ ಕಲ್ಲು ಮತ್ತು ಇತರೆ ಉಪಖನಿಜಗಳ ಕಾನೂನು ಬದ್ಧ ವಿಲೇವಾರಿಗೆ ಕರ್ನಾಟಕ ಉಪಖನಿಜ ರಿಯಾಯಿತಿ ನಿಯಮಾವಳಿ 1994 ರ ತಿದ್ದುಪಡಿ ನಿಯಮಾವಳಿ 2023 ನಿಯಮ 3-ಎ ಅನ್ವಯ ಗಣಿ ಮತ್ತು ಭೂವಿಜ್ಞಾನ ಇಲಾಖೆಯಿಂದ ಕಡ್ಡಾಯವಾಗಿ ಅನುಮತಿಯನ್ನು ಪಡೆದು ಮುಂಗಡ ರಾಜಧನ ಮತ್ತು ಇತರೆ ಅನ್ವಯಿಕ ಶುಲ್ಕಗಳನ್ನು ಪಾವತಿಸತಕ್ಕದ್ದು. |
| 27 | ಪ್ರಾಧಿಕಾರವು ವಿಧಿಸುವ ಇತರೆ ಷರತ್ತುಗಳಿಗೆ ಬದ್ಧರಾಗಿರುವುದು. |

ಮೇಲ್ಕಂಡ ಷರತ್ತುಗಳಿಗೊಳಪಟ್ಟು ಬೆಂಗಳೂರು ದಕ್ಷಿಣ ತಾಲ್ಲೂಕು, ಉತ್ತರಹಳ್ಳಿ ಹೋಬಳಿ, ಯಡಿಯೂರು ನಾಗಸಂದ್ರ ಗ್ರಾಮದ ರೀ ಸ.ನಂ.36/2, ಬಿಬಿಎಂಪಿ ಪಿಐಡಿ ನಂ, 51-39-60/1 ರಲ್ಲಿ ಬರುವ ಜಮೀನಿನ ವಿಸ್ತೀರ್ಣದ 3ಎ-27ಗುಂ (0ಎ-20ಗುಂ ಅ ಖರಾಬು ಸೇರಿ, 0ಎ-06ಗುಂ ಬ ಖರಾಬು ಹೊರತುಪಡಿಸಿ) ವಿಸ್ತೀರ್ಣದ ಜಮೀನುಗಳಲ್ಲಿ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ರ ಕಲಂ (15) & (17) ರ ಅಡಿಯಲ್ಲಿ ವಸತಿ ಅಭಿವೃದ್ಧಿ ಯೋಜನಾ ನಕ್ಷೆಗೆ ಅನುಮೋದನೆ ನೀಡಲಾಗಿದೆ.

ನಗರ ಯೋಜಕ ಸದಸ್ಯರು
ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ
ಬೆಂಗಳೂರು.

**ಇವರಿಗೆ,**

ಶ್ರೀಮತಿ. ಶರ್ಮಿಳಾ ಭಕ್ತಾರಾಮ್
ನಂ. 1361, 9ನೇ ಅಡ್ಡರಸ್ತೆ,
ಜೆ.ಪಿನಗರ 1ನೇ ಹಂತ,
ಬೆಂಗಳೂರು-560 078.